# ಕುವೆಂಪು ವಿಶ್ವವಿದ್ಯಾಲಯ

ಸಂ: ಕುವಿ:ಕುಸ:ಪಿಎಸ್/ /2020-21

ವಿಶ್ವವಿದ್ಯಾಲಯ ಕಾರ್ಯಾಲಯ,
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ-577451.
ದಿನಾಂಕ: 09-04-2020

**ಸುತ್ತೋಲೆ**

ವಿಷಯ:-ಆನ್-ಲೈನ್ ಮೂಲಕ ತರಗತಿಗಳನ್ನು ನಡೆಸುವ ಕುರಿತು.

*****

ದೇಶಾದ್ಯಂತ ಹರಡುತ್ತಿರುವ ಕೋವಿಡ್-19 ನಿಯಂತ್ರಿಸುವ ಸಲುವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರದ ಆದೇಶದ ಮೇರೆಗೆ ದಿನಾಂಕ:14-04-2020ರವರೆಗೆ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗ/ಕಛೇರಿಗಳಿಗೆ ರಜೆಯನ್ನು ಘೋಷಿಸಲಾಗಿದೆ. ಹಾಗೂ ತರಗತಿಗಳು ಪ್ರಾರಂಭವಾಗುವುದು ಇನ್ನಷ್ಟು ವಿಳಂಬವಾಗುವ ಸಾಧ್ಯತೆಗಳಿರುವುದರಿಂದ ವಿಶ್ವವಿದ್ಯಾಲಯದ ಧನಸಹಾಯ ಆಯೋಗದ ನಿರ್ದೇಶನದ ಮೇರೆಗೆ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಆನ್-ಲೈನ್ ಮೂಲಕ ತರಗತಿಗಳನ್ನು ನಡೆಸಲು ಉದ್ದೇಶಿಸಲಾಗಿದೆ. ಈ ಹಿನ್ನೆಲೆಯಲ್ಲಿ ಇದರ ಮೊದಲ ಹಂತವಾಗಿ ಆಯಾಯ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳು ತಮ್ಮ ತಮ್ಮ ವಿಭಾಗದ ಸೆಮಿಸ್ಟರ್‌ವಾರು ವಿದ್ಯಾರ್ಥಿಗಳ WhatsApp Group ಅನ್ನು ದಿನಾಂಕ:11-04-2020ರೊಳಗೆ ರಚಿಸಿಕೊಳ್ಳುವಂತೆ ಸೂಚಿಸಲಾಗಿದೆ. ಹಾಗೂ ಈ ಗುಂಪುಗಳಿಗೆ ಆಯಾಯ ವಿಭಾಗದ ಎಲ್ಲಾ ಖಾಯಂ ಮತ್ತು ಅತಿಥಿ ಉಪನ್ಯಾಸಕರುಗಳನ್ನು ಸೇರ್ಪಡೆಗೊಳಿಸುವಂತೆ ಸೂಚಿಸಲಾಗಿದೆ. ಕೈಗೊಂಡ ಕ್ರಮಗಳ ಮಾಹಿತಿಯನ್ನು ಡಾ.ಸಿ.ಜೆ.ಪ್ರಭಾಕರ್, ನಿರ್ದೇಶಕರು ಯು.ಸಿ.ಸಿ.ಎಫ್ ಕೇಂದ್ರ ಇವರಿಗೆ ನೀಡುವುದು.

ವಿದ್ಯಾರ್ಥಿಗಳೊಂದಿಗೆ ಸಂಪರ್ಕ ಸಾಧಿಸಿ Zoom App/ ಮತ್ತು ಇತರೆ ಆನ್-ಲೈನ್ ವಿಧಾನಗಳ ಮೂಲಕ ತರಗತಿಗಳನ್ನು ನಡೆಸುವ ವಿವರಗಳನ್ನು ನಂತರ ತಿಳಿಸಲಾಗುವುದು.

9/4/2020
ಕುಲಸಚಿವ
ಕುವೆಂಪು ವಿಶ್ವವಿದ್ಯಾಲಯ.
ಜ್ಞಾನಸಹ್ಯಾದ್ರಿ, ಶಂಕರಘಟ್ಟ-577 451
ಶಿವಮೊಗ್ಗ ಜಿಲ್ಲೆ, ಕರ್ನಾಟಕ.

ಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಮುಖ್ಯಸ್ಥರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ ಶಿವಮೊಗ್ಗ/ ಕಡೂರು/ಚಿಕ್ಕಮಗಳೂರು – ಮುಂದಿನ ಅಗತ್ಯ ಸೂಕ್ತಕ್ರಮಕ್ಕಾಗಿ.
2. ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ ಕಡೂರು
3. ಸಂಯೋಜನಾಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ ಸ್ನಾತಕೋತ್ತರ ಕೇಂದ್ರ ಚಿಕ್ಕಮಗಳೂರು
4. ಸಂಯೋಜನಾಧಿಕಾರಿಗಳು, ಯು.ಸಿ.ಸಿ.ಎಫ್. ಮತ್ತು ಐ.ಟಿ. ಸೆಲ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5. ಆಪ್ತ ಸಹಾಯಕರು : ಮಾನ್ಯ ಕುಲಪತಿಗಳು ಕುವೆಂಪು ವಿಶ್ವವಿದ್ಯಾಲಯ ಶಂಕರಘಟ್ಟ
6. ಕಛೇರಿ ಪ್ರತಿ